ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ಮತ್ತು ಕುಡಿಯುವ ನೀರಿನ ಬಗ್ಗೆ

ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

049 (462) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ಸ್ಥಿತಿಗತಿಗಳ ಬಗ್ಗೆ ಸರ್ಕಾರದ ಮಟ್ಟದಲ್ಲಿ ಮಾಹಿತಿ ಇದೆಯೇ ; ಇದ್ದಲ್ಲಿ 5 ವರ್ಷಗಳಲ್ಲಿ ರಾಜ್ಯದ ಅಂತರ್ಜಲ ಕುಸಿದಿರುವ ಪ್ರಮಾಣದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯದ ನಗರ ಪ್ರದೇಶಗಳು ಹಾಗೂ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಮೂಲವಾಗಿ ಕೊಳವೆಬಾವಿಗಳ ಮೇಲೆ ಶೇಕಡವಾರು ಎಷ್ಟು ಜನ ಅವಲಂಬಿಸಿದ್ದಾರೆ ; ಅವಲಂಬಿಸಿರುವ ಗ್ರಾಮಗಳ/ನಗರಗಳ ಬಗ್ಗೆ ಮಾಹಿತಿ ನೀಡುವುದು ;

(ಇ) ಜಿಲ್ಲಾವಾರು ಅಂತರ್ಜಲ ಹಾಗೂ ಮಳೆನೀರು ಕೊಯ್ಲು ಹಾಗೂ ಇತರೆ ಭೂಗೋಳ ನಿರ್ಮಾಣ (Geo Structure) ಬಗ್ಗೆ ವರದಿ ಸರ್ಕಾರದಲ್ಲಿ ಇದೆಯೇ ;

(ಈ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಅಂತರ್ಜಲದ ನೀರು ಕಲುಷಿತವಾಗಿದೆ (Contamination); ಮಾಹಿತಿ ಇದ್ದಲ್ಲಿ ಜಿಲ್ಲೆ/ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು;

(ಉ) ಇದನ್ನು ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)